ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

1662 (988); ಶ್ರೀ ಭೀಮಾ ನಾಯ್ಕ ಎಸ್ (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ತಂಬ್ರಹಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು (ಮಾಹಿತಿ ನೀಡುವುದು)?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಸರ್ಕಾರಿ ವೈದ್ಯಾಧಿಕಾರಿಗಳ ಕೊರತೆ

1663 (989); ಶ್ರೀ ಭೀಮಾ ನಾಯ್ಕ ಎಸ್ (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದು ಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

- ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್. ಹೆಚ್.ಎಂ.) ದ ಅಡಿಯಲ್ಲಿ ಸ್ತ್ರೀರೋಗ ತಜ್ಞತ್ತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.
- ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತ್ತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ₹ 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಶಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5000 ದಿಂದ ₹ 10,000ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹8000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿಲ ದಿನವೊಂದಕ್ಕೆ ₹1000 ದಂತೆ ಗೌರವ ಧನ- ನೀಡಲು ಅವಕಾಶ ಕಲ್ಪಿಸಲಾಗಿದೆ.

ಆದರೂ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

- ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸ ಲಾಗಿದೆ.

ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಮದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ದಂತ ಆರೋಗ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಹಲವು ವೃಂದಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಉದ್ದೇಶಿಲಾಗಿದೆ.

ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

1664 (2369); ಶ್ರೀ ಭೀಮಾ ನಾಯ್ಕ ಎನ್ (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ತಂಬ್ರ ಹಳ್ಳಿ ಮತ್ತು ಮರಿಯಮ್ಮನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು;